All India Radio: Bangalore
Regional Bulletin In Kannada
06.01.2026 / 6.40 p.m.
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಬಳ್ಳಾರಿ ಘಟನೆ; ಎರಡು ಬಾರಿ ಮರಣೋತ್ತರ ಪರೀಕ್ಷೆ, ಸತ್ಯಕ್ಕೆ ದೂರ- ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟನೆ
- ರಾಜ್ಯದ ಆರ್ಥಿಕ ವ್ಯವಸ್ಥೆ ಸಂಪೂರ್ಣ ಕುಸಿತ- ಸಂಸದ ಜಗದೀಶ್ ಶೆಟ್ಟರ್ ಆರೋಪ
- ವಿಜಯ್ ಹಜಾರೆ ಎಲೈಟ್ ಟ್ರೋಫಿ ಕ್ರಿಕೆಟ್; ಎ ಗುಂಪಿನ ಪಂದ್ಯದಲ್ಲಿಂದು ರಾಜಸ್ಥಾನ ವಿರುದ್ಧ ಕರ್ನಾಟಕ ತಂಡಕ್ಕೆ ಭರ್ಜರಿ ಜಯ
- ಬೆಂಗಳೂರು ಓಪನ್ ಟೆನಿಸ್; ೩೨ನೇ ಸುತ್ತಿನ ಪಂದ್ಯದಲ್ಲಿ ಭಾರತದ ದಕ್ಷಿಣೇಶ್ವರ್ ಸುರೇಶ್‌ಗೆ ಗೆಲುವು

***************

ಬಳ್ಳಾರಿ ಘಟನೆಯಲ್ಲಿ ಸಾವನ್ನಪ್ಪಿದ ವ್ಯಕ್ತಿಯ ಎರಡು ಬಾರಿ ಮರಣೋತ್ತರ ಪರೀಕ್ಷೆ ನಡೆಸಿಲ್ಲ ಎಂದು ವೈದ್ಯರು ಸ್ಪಷ್ಟಪಡಿಸಿದ್ದಾರೆ. ಎರಡು ಬಾರಿ ಮರಣೋತ್ತರ ಪರೀಕ್ಷೆ ನಡೆಸಲಾಗಿದೆ ಎಂಬುದು ಸತ್ಯಕ್ಕೆ ದೂರವಾದದು ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಹೇಳಿದ್ದಾರೆ.

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ನೀಡಿರುವ ಹೇಳಿಕೆಯ ಕುರಿತು ಬೆಂಗಳೂರಿನಲ್ಲಿಂದು ಪ್ರತಿಕ್ರಿಯಿಸಿದ ಅವರು, ಮೂರನೇ ಬಾರಿ ಗೃಹ ಸಚಿವನಾಗಿ ಕೆಲಸ ಮಾಡುತ್ತಿದ್ದೇನೆ. ಯಾವ ಸಂದರ್ಭದಲ್ಲಿ ಏನು ತೀರ್ಮಾನ ತೆಗೆದುಕೊಳ್ಳಬೇಕು. ರಾಜ್ಯದ ಕಾನೂನು ವ್ಯವಸ್ಥೆಯ ದೃಷ್ಟಿಯಿಂದ ಏನೆಲ್ಲ ತೀರ್ಮಾನ ತೆಗೆದುಕೊಳ್ಳಬೇಕು ಎಂಬ ಅರಿವು ತಮಗಿದೆ ಎಂದರು.

ಕಾನೂನು ಸುವ್ಯವಸ್ಥೆಯನ್ನು ಕಾಪಾಡುವ ಕೆಲಸವನ್ನು ಪೊಲೀಸ್ ಇಲಾಖೆಯು ಅವರ ಹಂತದಲ್ಲಿ ತೀರ್ಮಾನ ತೆಗೆದುಕೊಳ್ಳುತ್ತಾರೆ. ಇಂತಹ ಘಟನೆಗಳಾದ ಸಂದರ್ಭದಲ್ಲಿ ಸರ್ಕಾರ ಕೆಲವು ಕ್ರಮ ಕೈಗೊಳ್ಳಲು ಸೂಚನೆಗಳನ್ನು ನೀಡುತ್ತದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಹೇಳಿದರು.

***************

ಎರಡು ದಿನಗಳ ರಾಜ್ಯ ಪ್ರವಾಸದಲ್ಲಿರುವ ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್, ಎರಡನೇ ದಿನವಾದ ಇಂದು ಹೊಸಪೇಟೆಯ ಕಮಲಾಪುರದ ಬಳಿ ಇರುವ ಪುರಾತತ್ವ ಇಲಾಖೆಯ ವಸ್ತು ಸಂಗ್ರಹಾಲಯದಲ್ಲಿ ಡಿಜಿಟಲ್ ಗ್ಯಾಲರಿ ಉದ್ಘಾಟಿಸಿದರು.

ಬಳಿಕ ವಿಜಯನಗರ ಸಾಮ್ರಾಜ್ಯಕ್ಕೆ ಸಂಬಂಧಿಸಿದಂತೆ ಪುರಾತತ್ವ ಇಲಾಖೆಯ ಉತ್ಖನನ ವೇಳೆ ದೊರೆತಿರುವ ಶಿಲೆಗಳು, ವಸ್ತುಗಳನ್ನು ವೀಕ್ಷಿಸಿದರು.

ನಂತರ ಪುರಾತತ್ವ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಹಂಪಿ ಪ್ರವಾಸೋದ್ಯಮಕ್ಕೆ ಅಗತ್ಯವಿರುವ ಮೂಲಸೌಕರ್ಯ ಮತ್ತು ಹಂಪಿ ಅಭಿವೃದ್ಧಿ ಕುರಿತು ಚರ್ಚಿಸಿದರು.

***************

ಬೆಳಗಾವಿ ಜಿಲ್ಲೆ ಸವದತ್ತಿ ಯಲ್ಲಮ್ಮ ಕ್ಷೇತ್ರ ಅಭಿವೃದ್ಧಿಗೆ ರಾಜ್ಯ ಸರ್ಕಾರ ಕೊಡುಗೆ ಏನು ಎಂದು ಬೆಳಗಾವಿ ಸಂಸದ ಜಗದೀಶ ಶೆಟ್ಟರ ಪ್ರಶ್ನಿಸಿದ್ದಾರೆ.

ಹುಬ್ಬಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಪಾಲರ ಭಾಷಣದಲ್ಲಿ ೩೦೦ ಕೋಟಿ ರೂಪಾಯಿ ಅನುದಾನ ಎಂದು ಹೇಳಿದರು. ಆದರೆ ರಾಜ್ಯ ಸರ್ಕಾರ ಸವದತ್ತಿ ಯಲ್ಲಮ್ಮನ ಕ್ಷೇತ್ರಕ್ಕೆ ಭಕ್ತರ ದುಡ್ಡನ್ನೇ ನೀಡಿದೆ. ರಾಜ್ಯ ಸರ್ಕಾರ ಅನುದಾನ ನೀಡಿಲ್ಲ ಎಂದು ದೂರಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ಈಗ ಆಡಳಿತದ ಮೇಲಿನ ಹಿಡಿತ ಕಳೆದುಕೊಂಡಿದ್ದಾರೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟು ಹೋಗಿದೆ. ಆರ್ಥಿಕ ವ್ಯವಸ್ಥೆ ಸಂಪೂರ್ಣ ನೆಲಕಚ್ಚಿದೆ. ಜನಪರ ಯೋಜನೆಗಳಿಗೆ ಅನುದಾನ ಇಲ್ಲ, ಗುತ್ತಿಗೆದಾರರ ಬಿಲ್ ಬಾಕಿ ಉಳಿದಿವೆ. ಕೇಂದ್ರ ಸರ್ಕಾರಗಳ ಯೋಜನೆಗಳಿಗೆ ಭೂಸ್ವಾಧೀನಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಹಣ ಬಿಡುಗಡೆ ಮಾಡುತ್ತಿಲ್ಲ ಎಂದು ಸಂಸದ ಜಗದೀಶ ಶೆಟ್ಟರ್ ಆರೋಪಿಸಿದರು.

***************

ಬ್ಯಾಂಕುಗಳು ಕೇವಲ ಹಣಕಾಸು ಸಂಸ್ಥೆಗಳಲ್ಲ. ಅವುಗಳು ಸಮಾಜದ ಆರ್ಥಿಕ ಚಲನೆಗೆ ದಿಕ್ಕು ತೋರಿಸುವ ಪ್ರಮುಖ ಸಂಸ್ಥೆಗಳಾಗಿವೆ ಎಂದು ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಗದಗ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿಂದು ಜರುಗಿದ ಜಿಲ್ಲಾ ಮಟ್ಟದ ಬ್ಯಾಂಕುಗಳ ಸಲಹಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಆರ್ಥಿಕ ಅಭಿವೃದ್ಧಿಯಲ್ಲಿ ಬ್ಯಾಂಕುಗಳು ಪ್ರಮುಖ ಪಾತ್ರ ವಹಿಸಬೇಕು. ಸರ್ಕಾರದ ಜನಪರ ಯೋಜನೆಗಳ ಲಾಭ ಪ್ರತಿಯೊಬ್ಬ ಅರ್ಹ ವ್ಯಕ್ತಿಗೂ ತಲುಪುವಂತೆ ಬ್ಯಾಂಕುಗಳು ಕಾರ್ಯನಿರ್ವಹಿಸಬೇಕು ಎಂದರು.

ಇದೇ ವೇಳೆ, ಪ್ರಧಾನಮಂತ್ರಿ ಜನಧನ ಯೋಜನೆ, ಮುದ್ರಾ ಸಾಲ, ಸ್ವನಿಧಿ ಯೋಜನೆ, ಕಿಸಾನ್ ಕ್ರೆಡಿಟ್ ಕಾರ್ಡ್, ಸ್ವಸಹಾಯ ಸಂಘಗಳಿಗೆ ಸಾಲ ವಿತರಣೆ ಸೇರಿದಂತೆ ಪ್ರಮುಖ ಯೋಜನೆಗಳ ಪ್ರಗತಿಯನ್ನು ಸಂಸದ ಬೊಮ್ಮಾಯಿ ಪರಿಶೀಲಿಸಿದರು.

***************

ಬಾಗಲಕೋಟೆ ಜಿಲ್ಲೆಯ ಮುಧೋಳ ತಾಲೂಕಿನ ರೂಗಿ ಗ್ರಾಮದಲ್ಲಿ ಅಗ್ನಿ ಅವಘಡದಿಂದ ಕಬ್ಬು ಬೆಳೆಗೆ ಸಂಭವಿಸಿದ ಹಾನಿ ಸ್ಥಳಕ್ಕೆ ಇಂದು ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಭೇಟಿ ನೀಡಿ ಪರಿಶೀಲಿಸಿದರು.

ಸಂತ್ರಸ್ತ ರೈತರೊಂದಿಗೆ ಸಚಿವರು ಮಾತುಕತೆ ನಡೆಸಿ, ಬೆಳೆ ಹಾನಿಯ ಪ್ರಮಾಣ ಹಾಗೂ ನಷ್ಟದ ವಿವರಗಳನ್ನು ಪಡೆದರು.

ಅಗ್ನಿ ಅವಘಡದಿಂದ ಸುಮಾರು ೧೧೩ ಕ್ಕಿಂತಲೂ ಹೆಚ್ಚು ಎಕರೆ ಕಬ್ಬು ಹಾನಿಯಾಗಿದೆ. ರೈತರು ಸಂಕಷ್ಟದಲ್ಲಿದ್ದಾರೆ. ಆದ್ದರಿಂದ ತ್ವರಿತವಾಗಿ ಸಮೀಕ್ಷೆ ನಡೆಸಿ, ಸೂಕ್ತ ಪರಿಹಾರ ಒದಗಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬೆಳೆ ಹಾನಿಗೆ ಸಂಬಂಧಿಸಿದ ವರದಿ ಸಿದ್ಧಗೊಳಿಸಿ, ಪರಿಹಾರ ವಿತರಣೆಯ ಪ್ರಕ್ರಿಯೆಯನ್ನು ವೇಗವಾಗಿ ಪೂರ್ಣಗೊಳಿಸುವಂತೆ ಸಚಿವ ಆರ್.ಬಿ.ತಿಮ್ಮಾಪೂರ ಅಧಿಕಾರಿಗಳಿಗೆ ನಿರ್ದೇಶಿಸಿದರು.

***************

ಕೃಷಿ ಇಲಾಖೆ ವ್ಯಾಪ್ತಿಯಲ್ಲಿ ಫಲಾನುಭವಿ ಆಧಾರಿತ ಯೋಜನೆಗಳಡಿ ರೈತರಿಗೆ ನ್ಯಾಯಯುತವಾಗಿ ಸೌಲಭ್ಯಗಳನ್ನು ಕಲ್ಪಿಸುವಂತೆ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ್ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಯಾದಗಿರಿ ನಗರದ ಜಿಲ್ಲಾಡಳಿತ ಭವನದಲ್ಲಿನ ಕೃಷಿ ಇಲಾಖೆ ಕಚೇರಿಗೆ ಅನಿರೀಕ್ಷಿತವಾಗಿ ಭೇಟಿ ನೀಡಿದ ಅವರು, ರೈತರು ಸೌಲಭ್ಯ ಕೋರಿ ಬಂದಾಗ ತಕ್ಷಣ ಅವರಿಗೆ ನೆರವಾಗಬೇಕು. ಸಕಾಲಕ್ಕೆ ಸೌಲಭ್ಯ ದೊರೆಯದ ಸಂದರ್ಭದಲ್ಲಿ ಅವರು ತೀವ್ರ ಸಂಕಷ್ಟಕ್ಕೆ ಒಳಗಾಗುವುದರಿಂದ ರೈತರ ಸಂಕಷ್ಟಗಳಿಗೆ ತಕ್ಷಣ ಸ್ಪಂದಿಸುವಂತೆ ಅವರು ಸೂಚನೆ ನೀಡಿದರು.

ನಂತರ ಸಮಾಜ ಕಲ್ಯಾಣ ಇಲಾಖೆ ಕಚೇರಿಗೆ ಭೇಟಿ ನೀಡಿದ ಅವರು, ಅಧಿಕಾರಿಗಳು ವಸತಿ ನಿಲಯಗಳಿಗೆ ನಿರಂತರ ಭೇಟಿ ನೀಡುವ ಜೊತೆಗೆ ಕೈಗೊಂಡ ಕ್ರಮ, ಆಯಾ ವಸತಿ ನಿಲಯ ಅಧಿಕಾರಿಗಳಿಗೆ ನೀಡಿದ ಸೂಚನೆಗಳನ್ನು ನಮೂದಿಸಿ, ದಾಖಲೀಕರಣಗೊಳಿಸಬೇಕು. ವಸತಿ ನಿಲಯಗಳ ಸ್ವಚ್ಛತೆ, ಮೂಲಸೌಕರ್ಯಗಳನ್ನು ಆದ್ಯತೆ ಮೇಲೆ ಕಲ್ಪಿಸಬೇಕು. ವಿದ್ಯಾರ್ಥಿಗಳು, ವಿಶೇಷವಾಗಿ ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ನಿಗಾವಹಿಸಲು ಅವರು ಸೂಚಿಸಿದರು.

***************

ಚಿಕ್ಕಬಳ್ಳಾಪುರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕೃಷಿ ಇಲಾಖೆ ಸಹಯೋಗದಲ್ಲಿ ನಾಳೆ 'ಸಿರಿಧಾನ್ಯಗಳ ನಡಿಗೆ' ಕಾರ್ಯಕ್ರಮವನ್ನು ಸರ್.ಎಂ.ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಸಿರಿಧಾನ್ಯಗಳನ್ನು ಬೆಳೆಯುವ ಬಗ್ಗೆ ಹೆಚ್ಚು ಉತ್ತೇಜನ ನೀಡಲು ಮತ್ತು ಪ್ರೋತ್ಸಾಹಿಸಲು ಹಾಗೂ ಸಿರಿಧಾನ್ಯಗಳ ಉಪಯೋಗಗಳ ಮಹತ್ವದ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಈ ಕಾರ್ಯಕ್ರಮವನ್ನು ವಿವಿಧ ಇಲಾಖೆಗಳ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದೆ.

'ಸಿರಿಧಾನ್ಯಗಳ ನಡಿಗೆ' ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಹಾಗೂ ಉನ್ನತ ಶಿಕ್ಷಣ ಸಚಿವರಾದ ಡಾ.ಎಂ.ಸಿ.ಸುಧಾಕರ್ ಉದ್ಘಾಟಿಸಲಿದ್ದಾರೆ ಎಂದು ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

***************

ವಿಜಯಪುರಕ್ಕೆ ಇದೇ ೯ ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆಗಮಿಸಲಿದ್ದಾರೆ. ಈ ವೇಳೆ, ಜಿಲ್ಲಾ ಬಸ್ ನಿಲ್ದಾಣಕ್ಕೆ 'ಕಿತ್ತೂರು ರಾಣಿ ಚೆನ್ನಮ್ಮ ಬಸ್ ನಿಲ್ದಾಣ' ಎಂದು ನಾಮಕರಣ ಮಾಡಲಾಗುವುದು. ಜೊತೆಗೆ ರಾಣಿ ಚೆನ್ನಮ್ಮರ ಭವ್ಯ ಪುತ್ಥಳಿಯ ಅನಾವರಣ, ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಲೋಕಾರ್ಪಣೆಗೊಳಿಸಲಿದ್ದಾರೆ ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಪೂರ್ವಸಿದ್ಧತೆ ಕುರಿತು ವಿಜಯಪುರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿಂದು ಸಚಿವರು ಸಭೆ ನಡೆಸಿದರು.

***************

ಮಂಡ್ಯ ಜಿಲ್ಲೆಯಲ್ಲಿ ನಿರುದ್ಯೋಗವನ್ನು ಹೋಗಲಾಡಿಸಲು ಜಿಲ್ಲೆಗೆ ಕಾರ್ಖಾನೆಗಳು ಬರಬೇಕು. ಹಾಗಾಗಿ ಜಿಲ್ಲೆಯ ಸಾತನೂರು ಫಾರ್ಮ್‌ನಲ್ಲಿ ಕಾಡಾ ಗೆ ಸೇರಿದ ಸರ್ವೇ ನಂಬರ್ ೨೫೭ ರಲ್ಲಿರುವ ೯೦ ಎಕರೆ ಜಾಗವನ್ನು ಇಂದು ವಿಕ್ಷೀಸಲಾಗಿದೆ ಎಂದು ಶಾಸಕ ರವಿಕುಮಾರ್ ತಿಳಿಸಿದ್ದಾರೆ.

ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸದರಿ ಜಾಗ ಅಚ್ಚುಕಟ್ಟಾದ ಪ್ರದೇಶವಾಗಿದೆ. ಈ ಜಾಗವನ್ನು ಖಾಲಿ ಬಿಡುವುದಕ್ಕಿಂತ ಕೈಗಾರಿಕೆಗೆ ಮೀಸಲಿಡಬೇಕು. ಈಗಾಗಲೇ ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು ಹಾಗೂ ಕೃಷಿ ಸಚಿವ ಚೆಲುವರಾಯಸ್ವಾಮಿ ಅವರು ಈ ಸ್ಥಳದಲ್ಲಿ ಕಾರ್ಖಾನೆಗಳು ಬರುವುದಾದರೆ, ಈ ಕುರಿತು ಸಂಪುಟದಲ್ಲಿ ಚರ್ಚಿಸಿ, ಈ ಪ್ರದೇಶವನ್ನು ಕೈಗಾರಿಕೆಗೆ ಮೀಸಲಿಡೋಣ ಎಂದಿದ್ದಾರೆ ಎಂದು ಹೇಳಿದರು.

***************

ಅಹಮದಾಬಾದ್‌ನ ಗುಜರಾತ್ ಕಾಲೇಜು ಕ್ರೀಡಾಂಗಣದಲ್ಲಿ ಇಂದು ನಡೆದ ವಿಜಯ್ ಹಜಾರ್ ಎಲೈಟ್ ಟ್ರೋಫಿ ಪಂದ್ಯಾವಳಿಯ ಎ ಗುಂಪಿನ ಏಕದಿನ ಕ್ರಿಕೆಟ್ ಪಂದ್ಯದಲ್ಲಿ ರಾಜಸ್ಥಾನ ವಿರುದ್ಧ ಕರ್ನಾಟಕ ತಂಡ ೧೫೦ ರನ್‌ಗಳ ಭರ್ಜರಿ ಜಯ ಸಾಧಿಸಿದೆ.

ಮೊದಲು ಬ್ಯಾಟ್ ಮಾಡಿದ ಕರ್ನಾಟಕ ತಂಡ, ನಿಗದಿತ ೫೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೩೨೪ ರನ್ ಗಳಿಸಿತು. ಈ ಗುರಿ ಬೆನ್ನತ್ತಿನದ ರಾಜಸ್ಥಾನ ತಂಡ ೩೮ ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೧೭೪ ರನ್‌ಗಳಿಸಲಷ್ಟೇ ಶಕ್ತವಾಯಿತು.

***************

ಬೆಂಗಳೂರಿನಲ್ಲಿ ನಡೆಯುತ್ತಿರುವ ಬೆಂಗಳೂರು ಓಪನ್ ಟೆನಿಸ್ ಪಂದ್ಯಾವಳಿಯ ೩೨ನೇ ಸುತ್ತಿನ ಪಂದ್ಯದಲ್ಲಿ ಕ್ರೊಯೇಷಿಯಾದ ಡುಯೆ ಆಯುಕೋವಿಚ್ ವಿರುದ್ಧ ಭಾರತದ ದಕ್ಷಿಣೇಶ್ವರ ಸುರೇಶ್ ೬-೪, ೬-೪ ಅಂತರದಿಂದ ಗೆಲುವು ಸಾಧಿಸಿದ್ದಾರೆ.

೩೨ನೇ ಸುತ್ತಿನ ಮತ್ತೊಂದು ಪಂದ್ಯದಲ್ಲಿ ಕಜಕಿಸ್ತಾನದ ಬಿಬಿತ್ ಸುಖಾಯಾವ್ ವಿರುದ್ಧ ೬-೧, ೬-೨ ಅಂತರದಲ್ಲಿ ಭಾರತದ ಆರ್ಯನ್ ಶಾ ಪರಾಭವಗೊಂಡಿದ್ದಾರೆ.

ಇದಕ್ಕೂ ಮೊದಲು ಭಾರತದ ಕರಣ್ ಸಿಂಗ್ ವಿರುದ್ಧ ೬-೨, ೬-೪ ಅಂತರದಲ್ಲಿ ಕ್ರೊಯೇಷಿಯಾದ ಬೋರ್ನಾ ಗೋಜೋ ಜಯ ಸಾಧಿಸಿದರು.

*******ಮುಕ್ತಾಯ*******